ಸ್ವಾತಂತ್ರ್ಯದ ಅಮೃತಮಹೋತ್ಸವ

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521

**ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.**

ಅಂತರ್ಜಾಲ : https://kptcl.karnataka.gov.in

ದೂರವಾಣಿ ಸಂಖ್ಯೆ : 080-22212343

ಇ-ಮೇಲ್ ವಿಳಾಸ : director.ahr.kptcl@gmail.com

**ಸಂಖ್ಯೆ: ಕವಿಪ್ರನಿನಿ/ಬಿ16/820/2019-20** **ದಿನಾಂಕ:** 14 MAR 2023

## ಸುತ್ತೋಲೆ

**ವಿಷಯ:** ಪರೀಕ್ಷಾರ್ಥ/ವಿಸ್ತರಿಸಿದ ಪರೀಕ್ಷಾರ್ಥ ಅವಧಿಯಲ್ಲಿ ನಿಗಧಿಪಡಿಸಿರುವ ಇಲಾಖಾ ಪರೀಕ್ಷೆಗಳನ್ನು ಉತ್ತೀರ್ಣರಾಗದೇ ಇರುವಂತಹ ನೌಕರರನ್ನು ಸೇವೆಯಿಂದ ವಜಾಗೊಳಿಸುವ ಬಗ್ಗೆ.

**ಉಲ್ಲೇಖ:**
1. ಮಂಡಳಿ ಪತ್ರ ಸಂಖ್ಯೆ: ಕವಿಮಂ /ಬಿ16/ಬಿ15/7982/83-84 ದಿನಾಂಕ: 26.02.1994
2. ನಿಗಮ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/5816/82-83 ದಿನಾಂಕ: 07.03.2003.
3. ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ16/820/2019-20 ದಿನಾಂಕ: 03.06.2021.
4. ದಿನಾಂಕ: 02.02.2023 ರಂದು ನಡೆದ ಇಲಾಖಾ ಪರೀಕ್ಷಾ ಮಂಡಳಿಯ 35ನೇ ಸಭೆಯ ನಡವಳಿ ಸಂಖ್ಯೆ: ಕವಿಪ್ರನಿನಿ/ಬಿ66/41637/2013-14 ದಿನಾಂಕ: 02.02.2023.

***

ಪರೀಕ್ಷಾರ್ಥ/ವಿಸ್ತರಿಸಿದ ಪರೀಕ್ಷಾರ್ಥ ಅವಧಿಯಲ್ಲಿ ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳನ್ವಯ, ನೇರ ನೇಮಕಾತಿ ಮೂಲಕ ಆಯ್ಕೆಗೊಂಡ ಅಭ್ಯರ್ಥಿಗಳು, ನಿಗದಿತ ಪರೀಕ್ಷೆ/ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದಿದ್ದಲ್ಲಿ ನಿಯಮಾನುಸಾರ ಸೇವೆಯಿಂದ ವಜಾಗೊಳಿಸಲು ಅಗತ್ಯ ಕ್ರಮ ಜರುಗಿಸುವಂತೆ ಈಗಾಗಲೇ ಸುತ್ತೋಲೆ/ಆದೇಶ/ಪತ್ರಗಳ ಮೂಲಕ ಹಲವಾರು ಬಾರಿ ನಿರ್ದೇಶನಗಳನ್ನು ನೀಡಲಾಗಿರುತ್ತದೆ. ಆದಾಗ್ಯೂ, ನೇಮಕಾತಿ ಪ್ರಾಧಿಕಾರಿಗಳು ಈ ಸಂಬಂಧ ಯಾವುದೇ ಕ್ರಮ ಜರುಗಿಸದೇ ನೌಕರರು ವಯೋನಿವೃತ್ತಿ ಹೊಂದಲು ಅವಕಾಶ ಮಾಡಿಕೊಡುತ್ತಿರುತ್ತಾರೆ ಹಾಗೂ ನಿವೃತ್ತಿ ನಂತರ ವಿಶೇಷ ಪ್ರಕರಣವೆಂದು ಪರಿಗಣಿಸಿ ಪಿಂಚಣಿ ಸವಲತ್ತುಗಳನ್ನು ಮಂಜೂರು ಮಾಡಲು ಪ್ರಸ್ತಾವನೆಗಳನ್ನು ಅನುಮೋದನೆಗಾಗಿ ನಿಗಮ ಕಾರ್ಯಾಲಯಕ್ಕೆ ಸಲ್ಲಿಸುತ್ತಿರುತ್ತಾರೆ. ಇಂತಹ ಕ್ರಮವು ನೇಮಕಾತಿ ಪ್ರಾಧಿಕಾರಿಗಳ ಕರ್ತವ್ಯ ಲೋಪವೆಂದು ಪರಿಗಣಿಸಲಾಗುತ್ತದೆ.

ಈ ಸಂಬಂಧ, ಪರೀಕ್ಷಾರ್ಥ ಅವಧಿಯನ್ನು ಪೂರ್ಣಗೊಳಿಸಲು ನಿಗದಿಪಡಿಸಿರುವ ವೃತ್ತಿ ಪೂರ್ವ ತರಬೇತಿ ಪರೀಕ್ಷೆ, ಕಡ್ಡಾಯ ಇಲಾಖಾ ಪರೀಕ್ಷೆ ಮತ್ತು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗದ ನೌಕರರ ವಿರುದ್ಧ ನಿಗಮದ ನೌಕರರ (ವರ್ಗೀಕರಣ, ಶಿಸ್ತು ನಿಯಂತ್ರಣ ಮತ್ತು ಮೇಲ್ಮನವಿ) ನಿಬಂಧನೆಗಳ ಅನ್ವಯ ಕೂಡಲೇ ಶಿಸ್ತು ಕ್ರಮ ಜರುಗಿಸಿ ನಿಯಮಾನುಸಾರ ಸೇವೆಯಿಂದ ವಜಾಗೊಳಿಸಲು ಎಲ್ಲಾ ಸಕ್ಷಮ / ನೇಮಕಾತಿ ಪ್ರಾಧಿಕಾರಿಗಳಿಗೆ ಅಂತಿಮವಾಗಿ ಕಟ್ಟುನಿಟ್ಟಾಗಿ ನಿರ್ದೇಶನ ನೀಡಲಾಗಿದೆ.

ನಿಗಮದ ಈ ನಿರ್ದೇಶನದ ನಂತರವೂ ಸಹಾ ಅಗತ್ಯ ಕ್ರಮ ಜರುಗಿಸದಿದ್ದಲ್ಲಿ, ಸಂಬಂಧಪಟ್ಟ ಸಕ್ಷಮ/ನೇಮಕಾತಿ ಪ್ರಾಧಿಕಾರಿಗಳನ್ನು ಪ್ರಕರಣಗಳಲ್ಲಿ ವೈಯಕ್ತಿಕವಾಗಿ ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತುಕ್ರಮ ಕೈಗೊಳ್ಳಲಾಗುವುದು.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

ಗೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/ನಿರ್ದೇಶಕರು(ಹಣಕಾಸು)/ ನಿರ್ದೇಶಕರು(ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

   https://kptcl.karnataka.gov.in for information of:
6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-

1. ಶ್ರೀ.ಆರ್.ಹೆಚ್.ಲಕ್ಷ್ಮಿಪತಿ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋ.ಸಂ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಕೆ.ಶಿವಣ್ಣ, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ (ನೋ.ಸಂ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ (ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೊಮಾ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ /ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ, ಬೆಂಗಳೂರು.